# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

12

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ     ದಿನಾಂಕ : DATE : 17/9/2010

### ಕರ್ನಾಟಕದಲ್ಲೇ ಕ್ಯಾಸಿನೋ ಆರಂಭಿಸಿ: ಶಾಸಕ ಸುರೇಶ್ ಗೌಡ

**ನಾಗಮಂಗಲ:** ಕರ್ನಾಟಕದ ದುಡ್ಡೆಲ್ಲಾ ಶ್ರೀಲಂಕಾದ ಕ್ಯಾಸಿನೋಗೆ ಹೋಗುತ್ತಿದೆ. ರಾಜ್ಯದಲ್ಲಿ ಹೆಚ್ಚು ದುಡ್ಡು ಮಾಡಿ ಕ್ಯಾಸಿನೋದಲ್ಲಿ ಕಳೆದುಕೊಳ್ಳುತ್ತಿದ್ದಾರೆ, ಅದಕ್ಕಾಗಿ ಇಲ್ಲಿನ ದುಡ್ಡು ಇಲ್ಲೇ ಉಳಿಯಬೇಕಾದರೆ ಕ್ಯಾಸಿನೋ ಕರ್ನಾಟಕದಲ್ಲೇ ಆರಂಭಿಸಿ ಎಂದು ಸರ್ಕಾರಕ್ಕೆ ಸಲಹೆ ನೀಡುವುದಾಗಿ ಶಾಸಕ ಸುರೇಶ್‌ಗೌಡ ಹೇಳಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಣವೊಂದಿದ್ದರೆ ಪ್ರಪಂಚದಲ್ಲಿ ಸಿಗುವ ಎಲ್ಲ ವಸ್ತುಗಳು ಶ್ರೀಲಂಕಾದ ಕ್ಯಾಸಿನೋದಲ್ಲಿಯೇ ಸಿಗುತ್ತದೆ. ಯಾರ್ಯಾರು ಹೆಚ್ಚಿಗೆ ದುಡ್ಡು ಮಾಡಿದ್ದಾರೋ ಅವರೆಲ್ಲರೂ ಅಲ್ಲಿ ಹೋಗಿ ದುಡ್ಡು ಕಳೆಯುತ್ತಿದ್ದಾರೆ. ಕ್ಯಾಸಿನೋಗೆ ಶಾಸಕ ಜಮೀರ್ ಒಬ್ಬರೇ ಹೋಗುತ್ತಿಲ್ಲ, ಅಲ್ಲಿಗೆ ಒಂದು ದೊಡ್ಡ ಗುಂಪೇ ಹೋಗುತ್ತಿದೆ ಎಂದರು.